ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪ್ರದೇಶವನ್ನು ಬೆಂಗಳೂರು ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ಒಳಪಡಿಸುವುದು

1123 (1610); ಶ್ರೀ ಚೆಲುವರಾಯಸ್ವಾಮಿ ಎನ್.

1) ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ಒಳಗೆ ಬರುವ ಪ್ರದೇಶವನ್ನು ಬೆಂಗಳೂರು ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ಒಳಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಪ್ರದೇಶವನ್ನು ತಕ್ಷಣ ಕಮೀಷನರೇಟ್ ವ್ಯಾಪ್ತಿಗೆ ಒಳಪಡಿಸಲು ಕ್ರಮ ಜರುಗಿಸಲಾಗುವುದೇ;

2) ಬೃಹತ್ ಬೆಂಗಳೂರು ಮಹಾನಗರಪಾಲಿಕೆ ರಚಿತವಾಗಿ ಅನೇಕ ವರ್ಷಗಳಾದರೂ, ಮಹಾನಗರಪಾಲಿಕೆ ವ್ಯಾಪ್ತಿಯೊಳಗೆ ಬರುವ ಪ್ರದೇಶಗಳು ಇನ್ನೂ ಬೆಂಗಳೂರು ಗ್ರಾಮಾಂತರ, ರಾಮನಗರ, ಚಿಕ್ಕಬಳ್ಳಾಪುರ ಜಿಲ್ಲೆಗಳ ಗ್ರಾಮಾಂತರ ಪ್ರದೇಶಗಳ ಠಾಣೆಗಳ ವ್ಯಾಪ್ತಿಗೆ ಬರುತ್ತಿದ್ದು, ಕಾನೂನು ಸುವ್ಯವಸ್ಥೆ ಮತ್ತು ಆಡಳಿತ ದೃಷ್ಟಿಯಿಂದ ಅನಾನುಕೂಲ ಉಂಟಾಗಿ ಸಾರ್ವಜನಿಕರಿಗೆ ವಿಪರೀತ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

3) ಮಾಗಡಿ ರಸ್ತೆಯ ಸುಂಕದಕಟ್ಟೆಯಲ್ಲಿ ಒಂದು ಪೊಲೀಸ್ ಠಾಣೆಯನ್ನು ಸ್ಥಾಪಿಸಲು ಹಾಗೂ ಈಗಿನ ಬ್ಯಾಡರಹಳ್ಳಿ ಪೊಲೀಸ್ ಉಪಠಾಣೆಯನ್ನು (ಔಟ್‌ಪೋಸ್ಟ್) ಹೇರೋಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿರುವ ಪ್ರದೇಶಗಳ ಸಾರ್ವಜನಿಕರಿಗೆ ಅನೂಕೂಲವಾಗುವಂತೆ ಸಿಂಡಿಕೇಟ್ ಬ್ಯಾಂಕ್ ಲೇಔಟ್‌ಗೆ ಸ್ಥಳಾಂತರಿಸಲು ಕ್ರಮ ಜರುಗಿಸಲಾಗುವುದೇ?

ಶ್ರೀ ಕೆ.ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು)

1) ರಾಮನಗರ ಜಿಲ್ಲೆಯ ಹೇರೋಹಳ್ಳಿ ವೃತ್ತದ ತಲಘಟ್ಟಪುರ ಪೊಲೀಸ್ ಠಾಣೆಯನ್ನು ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ಸೇರಿಸಿ ಸರ್ಕಾರದ ಮಂಜೂರಾತಿ ನೀಡಲಾಗಿದೆ. ಸದರಿ ಠಾಣಾ

ವ್ಯಾಪ್ತಿಯಲ್ಲಿರುವ ಬಿಬಿಎಂಪಿ ಪ್ರದೇಶಗಳನ್ನು ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಗೆ ಸೇರಿಸಲಾಗಿರುತ್ತದೆ.

ರಾಮನಗರ ಜಿಲ್ಲೆಯ ಕುಂಬಳಗೋಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿರುವ ಕೆಲವು ಪ್ರದೇಶಗಳನ್ನು ಬೆಂಗಳೂರು ನಗರ ಪೊಲೀಸ್ ಘಟಕದ ಕೆಂಗೇರಿ ಮತ್ತು ಜ್ಞಾನಭಾರತಿ ಪೊಲೀಸ್ ಠಾಣಾ ಸರಹದ್ದಿಗೆ ಸೇರಿಸಲು ಹಾಗೂ ರಾಮನಗರ ಜಿಲ್ಲೆಯ ತಾವರೆಕೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿರುವ ಕೆಲವು ಪ್ರದೇಶಗಳನ್ನು ಬೆಂಗಳೂರು ನಗರ ಪೊಲೀಸ್ ಘಟಕದ ಕಾಮಾಕ್ಷಿಪಾಳ್ಯ ಮತ್ತು ಜ್ಞಾನಭಾರತಿ ಪೊಲೀಸ್ ಠಾಣಾ ಸರಹದ್ದಿಗೆ ಸೇರಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

2) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಆವಲಹಳ್ಳಿ ಮತ್ತು ಬನ್ನೇರುಘಟ್ಟ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಕೆಲವು ಪ್ರದೇಶಗಳು ಮಹಾನಗರಪಾಲಿಕೆ ವ್ಯಾಪ್ತಿಗೆ ಸೇರಿದ್ದು, ಆ ಪ್ರದೇಶಗಳಲ್ಲಿ ಕಾನೂನು ಸುವ್ಯವಸ್ಥೆ ಮತ್ತು ಆಡಳಿತ ದೃಷ್ಟಿಯಿಂದ ಅನಾನುಕೂಲ ಉಂಟಾಗಿರುವ ಬಗ್ಗೆ ಸಾರ್ವಜನಿಕರಿಂದ ಯಾವುದೇ ದೂರು ಅಥವಾ ಮಾಹಿತಿ ಇರುವುದಿಲ್ಲ.

ಚಿಕ್ಕಬಳ್ಳಾಪುರ ಜಿಲ್ಲೆಯ ಯಾವುದೇ ಪ್ರದೇಶ ಬೃಹತ್ ಬೆಂಗಳೂರು ಮಹಾನಗರಪಾಲಿಕೆಗೆ ಒಳಪಟ್ಟಿರುವುದಿಲ್ಲ.

ರಾಮನಗರ ಜಿಲ್ಲಾ ಪೊಲೀಸ್ ವ್ಯಾಪ್ತಿಯ ತಾವರೆಕೆರೆ ಪೊಲೀಸ್ ಠಾಣೆ ಮತ್ತು ಕುಂಬಳಗೋಡು ಠಾಣೆಗಳಿಗೆ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯ ಕೆಲವು ಗ್ರಾಮ/ ವಾರ್ಡ್‌ಗಳು ಒಳಪಟ್ಟಿದ್ದು, ಸದರಿ ಪ್ರದೇಶಗಳು ಜಿಲ್ಲಾ ಕೇಂದ್ರಾಡಳಿತಕ್ಕೆ ಸುಮಾರು 40–45 ಕಿ.ಮೀ. ದೂರದಲ್ಲಿದ್ದು, ಸದರಿ ಗ್ರಾಮ/ ವಾರ್ಡ್‌ಗಳ ಸಾರ್ವಜನಿಕರಿಗೆ ಪೊಲೀಸ್ ಆಡಳಿತವು, ಸಂಬಂಧಪಟ್ಟ ಪೊಲೀಸ್

ಠಾಣೆಗಳ ಮುಖಾಂತರ ಇಲಾಖಾ ವತಿಯಿಂದ ದೊರಕಬಹುದಾದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಕುಂಬಳಗೋಡು ಪೊಲೀಸ್ ಠಾಣೆಯು 2012 ರಲ್ಲಿ ಹೊಸದಾಗಿ ಇನ್ಸ್‌ಪೆಕ್ಟರ್ ದರ್ಜೆಯ ಪೊಲೀಸ್ ಠಾಣೆ ಆಗಿ ಪ್ರಾರಂಭಗೊಂಡಿದ್ದು, ಜಿಲ್ಲಾ ಕೇಂದ್ರದಿಂದ ಸುಮಾರು 25 ಕಿ.ಮೀ. ಅಂತರದಲ್ಲಿರುತ್ತದೆ. ತಾವರೆಕೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಬಿ.ಬಿ.ಎಂ.ಪಿ.ಗೆ ಒಳಪಡುವ ಪ್ರದೇಶಗಳಿಗೆ ಹೊಸದಾಗಿ ಬ್ಯಾಡರಹಳ್ಳಿ ಪೊಲೀಸ್ ಠಾಣೆ ಮಂಜೂರಾಗಿದ್ದು, ಶೀಘ್ರವಾಗಿ ಪ್ರಾರಂಭವಾಗಲಿದೆ. ಆದ್ದರಿಂದ, ಸದರಿ ಪ್ರದೇಶದ ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗಿರುವುದು ಕಂಡುಬಂದಿರುವುದಿಲ್ಲ.

3) ಮಾಗಡಿ ರಸ್ತೆಯ ಸುಂಕದಕಟ್ಟೆಯಲ್ಲಿ ಒಂದು ಪೊಲೀಸ್ ಠಾಣೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಇಲಾಖಾ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಬ್ಯಾಡರಹಳ್ಳಿ ಪೊಲೀಸ್ ಹೊರಠಾಣೆಯನ್ನು ಪೂರ್ಣ ಪ್ರಮಾಣದ ಪೊಲೀಸ್ ಠಾಣೆಯನ್ನಾಗಿ ಮೇಲ್ದರ್ಜೆಗೇರಿಸಿ ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ. ಸದರಿ ಠಾಣೆಯನ್ನು ಸಿಂಡಿಕೇಟ್ ಬ್ಯಾಂಕ್ ಲೇಔಟ್‌ಗೆ ಸ್ಥಳಾಂತರಿಸುವ ಬಗ್ಗೆ ಯಾವುದೇ ಪ್ರಸ್ತಾಪವಿರುವುದಿಲ್ಲ.